# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ. ಎಂ. ಎಫ್. ಸಿ., ಪಾವಗಡ ನ್ಯಾಯಾಲಯ

**ಸಿ.ಸಿ. ಸಂಖ್ಯೆ 1241/2021**

**ಪ್ರಾಸಾಃ 04**

**ಚಾಸಾಃ 14**

**<u>ದಿನಾಂಕ 22.09.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು</u>**

| | | |
|---|---|---|
| ಸಾಕ್ಷಿದಾರರ ಹೆಸರು | - | ನಟರಾಜು |
| ತಂದೆಯ ಹೆಸರು | - | ಕೃಷ್ಣಪ್ಪ |
| ವಯಸ್ಸು | - | 62 ವರ್ಷ |
| ವೃತ್ತಿ | - | ಅಕ್ಕಸಾಲಿಗ |
| ವಾಸ ಸ್ಥಳ | - | ಪಾವಗಡ |

**<u>ಮುಖ್ಯ ವಿಚಾರಣೆಃ ಮಾನ್ಯ ಎ.ಪಿ.ಪಿ ರವರಿಂದಃ</u>**

ಸಾಕ್ಷಿಗೆ ನಿಪಿ-3 ದೃಢೀಕೃತ ಅಮಾನತ್ತು ಮಹಜರ್ ನ್ನು ತೋರಿಸಲಾಯಿತು. ಅದನ್ನು ನೋಡಿ ತಮ್ಮ ಸಹಿಯನ್ನು ಗುರುತಿಸಿರುತ್ತಾರೆ. ಅದರಲ್ಲಿ ಏನು ಬರೆದಿದೆ ಎಂದು ನನಗೆಗ ಗೊತ್ತಿಲ್ಲ. ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಯಾವಾಗ ಎಲ್ಲಿ ಸಹಿ ಮಾಡಿದ್ದೇನೆ ಎಂದು ನನಗೆ ಗೊತ್ತಿಲ್ಲ. ಪೋಲಿಸ್ ರವರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಈ ಬಗ್ಗೆ ಯಾವುದೇ ಹೇಳಿಕೆ ನೀಡಿಲ್ಲ.

<u>(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಕೋರಿದ್ದು ಅನುಮತಿಸಲಾಯಿತು)</u>

<u>ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ</u>

2. ದಿ.01.10.2021 ರಂದು ಚಾಸಾ-17 ರವರ ಮನೆಯ ಹತ್ತಿರ 1 ನೇ ಆರೋಪಿ ತೋರಿಸಿದ ಸ್ಥಳದಲ್ಲಿ ಸ್ಥಳ ಮಹಜರ್ ಮಾಡಿ ಕಳ್ಳತನ ಮಾಡಿ ಬಚ್ಚಿಟ್ಟಿದ್ದ ಒಡವೆಗಳನ್ನು ತೋರಿಸಿದ್ದು, ಅವುಗಳನ್ನು ವಶಕ್ಕೆ ಪಡೆದು ಪೋಲಿಸ್ ರವರು ನಿಪಿ-3 ರಂತೆ ಮಹಜರ್ ಬರೆದು ಚಾಸಾ-12, 13 ರವರ ಸಮಕ್ಷಮ ವಶಕ್ಕೆ ಪಡೆದಿದ್ದಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಹಲ್ಲೆಗಳೆದ ಹೇಳಿಕೆಯನ್ನು ನಿಪಿ-4 ಎಂದು ಗುರುತಿಸಲಾಯಿತು. ನಿಪಿ-3 ಮತ್ತು 4 ರ ಬಗ್ಗೆ ಎಲ್ಲಾ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರು ಇಲ್ಲ ಎಂದು ನುಡಿದಿರುತ್ತಾರೆ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚುಮಾಡಲಾಯಿತು.)

ಓ . ಹೇ. ಕೇ. ಸರಿ ಇದೆ.

ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್. ಸಿ.,
ಪಾವಗಡ